# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಗಣಪತಿ ದುಮ್ಮಾ ಉಳ್ವೇಕರ್ ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಉತ್ತರ.**

**ವಿಷಯ: ಸಾಮಾಜಿಕ ಪಿಂಚಣಿ ಯೋಜನೆಗಳು, ಜನನ-ಮರಣ ನೋಂದಣಿ (ದೂರದ) ಪ್ರಮಾಣ ಪತ್ರ, ವಾಸ್ತವ್ಯ ಪ್ರಮಾಣ ಪತ್ರ ಸೇರಿದಂತೆ ಇನ್ನಿತರ ಜವಾಬ್ದಾರಿಗಳನ್ನು ಗ್ರಾಮ ಪಂಚಾಯತಿಗೆ ನೀಡುವುದರೊಂದಿಗೆ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು "ಗ್ರೂಪ್-ಬಿ ಗೆ ಉನ್ನತೀಕರಿಸುವುದು, ತಾಲ್ಲೂಕು ಮಟ್ಟದಲ್ಲಿ ವಸತಿ-ಆಡಳಿತ ವಿಷಯಗಳು ಪ್ರತ್ಯೇಕ ಸಹಾಯಕ ನಿರ್ದೇಶಕರ ಹುದ್ದೆ ಸೃಜನೆ ಮಾಡಿ, ಗ್ರಾಮ ಪಂಚಾಯತಿ ಮತ್ತು ಇಲಾಖೆಯ ಸಬಲೀಕರಣ ಮಾಡುವಂತೆ ಬಗ್ಗೆ.**

******

ಉತ್ತರ: ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಅನುಸೂಚಿ-1 ರಲ್ಲಿ ಗ್ರಾಮ ಪಂಚಾಯತಿಗಳ ಪ್ರಕಾರ್ಯಗಳ ಬಗ್ಗೆ ವಿವರಿಸಲಾಗಿದ್ದು, ಕ್ರಮ ಸಂಖ್ಯೆ:21 ರಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಶೇಷವಾಗಿ ವಿಕಲಚೇತನರು ಮತ್ತು ಮಾನಸಿಕ ಸವಾಲುಗಳುಳ್ಳವರ ಕಲ್ಯಾಣಕ್ಕೆ ಸಂಬಂಧಿಸಿದಂತೆ ನಿರ್ಗತಿಕರು, ವಿಧವೆಯರು, ವಯಸ್ಸಾದವರು, ವಿಶೇಷವಾಗಿ ವಿಕಲಚೇತನರಿಗೆ ಪಿಂಚಣಿ, ಮನಸ್ವಿನಿ ಮುಂತಾದಂತಹ ವಿವಿಧ ಸಾಮಾಜಿಕ ಸುರಕ್ಷಿತ ಸ್ಕೀಮುಗಳ ಅಡಿಯಲ್ಲಿ ಗ್ರಾಮ ಸಭೆಗಳಲ್ಲಿ ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಿರುವ ಬಗ್ಗೆ ಗ್ರಾಮ ಪಂಚಾಯತಿಯು ಮೇಲ್ವಿಚಾರಣೆ ಮತ್ತು ಉಸ್ತುವಾರಿ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸದರಿ ಅಧಿನಿಯಮ ಪ್ರಕರಣ 58 ರಂತೆ ಜನನ ಮತ್ತು ಮರಣಗಳ ತ್ವರಿತ ನೋಂದಣಿ ಮತ್ತು ಅದನ್ನು ವರದಿ ಮಾಡುವುದನ್ನು ಖಚಿತಪಡಿಸಿಕೊಳ್ಳುವುದು ಗ್ರಾಮ ಪಂಚಾಯತಿಯ ಪ್ರಕಾರ್ಯವಾಗಿರುತ್ತದೆ.

ಸಾಮಾಜಿಕ ಪಿಂಚಣಿ ಯೋಜನೆಗಳು ಮತ್ತು ವಾಸ್ತವ್ಯ ಪ್ರಮಾಣ ಪತ್ರ ವಿತರಣೆಯನ್ನು ಕಂದಾಯ ಇಲಾಖೆಯು, ಜನನ-ಮರಣ ನೋಂದಣಿಯನ್ನು ಸಾಂಖ್ಯಿಕ ಇಲಾಖೆಯು ಹಾಗೂ ದೂರದ ಪ್ರಮಾಣ ಪತ್ರ ವಿತರಣೆಯನ್ನು ಲೋಕೋಪಯೋಗಿ ಇಲಾಖೆಗಳು ನಿರ್ವಹಿಸುತ್ತಿವೆ.

2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಜನನ, ಮರಣ ಮತ್ತು ವಿವಾಹ ನೋಂದಣಿಯನ್ನು ಗ್ರಾಮ ಪಂಚಾಯತಿಗಳ ಮೂಲಕ ಮಾಡುವುದಾಗಿ ಘೋಷಣೆ ಮಾಡಿರುತ್ತಾರೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಮತ್ತು ಸಹಾಯಕ ನಿರ್ದೇಶಕರು (ಪಂ.ರಾಜ್) ಎಂಬ 2 ಹುದ್ದೆಗಳಿಗೆ ಮುಂಬಡ್ತಿ ನೀಡಲು ಅವಕಾಶವಿರುತ್ತದೆ. ರಾಜ್ಯದ 226 ತಾಲ್ಲೂಕು ಪಂಚಾಯತಿಗಳಲ್ಲಿ ತಲಾ 1 ಹುದ್ದೆಯಂತೆ ಹಾಲಿ ಅಸ್ತಿತ್ವದಲ್ಲಿದ್ದ 226 ಸಹಾಯಕ ನಿರ್ದೇಶಕ (ಗ್ರಾಮೀಣ ಉದ್ಯೋಗ) ಹುದ್ದೆಯ ಜೊತೆಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 05 ಕೆ.ಎಸ್.ಎಸ್ 2016, ದಿನಾಂಕ:31.5.2021 ರ ಆದೇಶದಲ್ಲಿ 226 ತಾಲ್ಲೂಕು ಪಂಚಾಯತ್ ಕಛೇರಿಗಳಿಗೆ ತಲಾ 1 ಹುದ್ದೆಯಂತೆ 226 ಸಹಾಯಕ ನಿರ್ದೇಶಕ (ಪಂಚಾಯತ್ ರಾಜ್) ಹುದ್ದೆಗಳನ್ನು ಸೃಜಿಸಿ ಆದೇಶ ಹೊರಡಿಸಲಾಗಿದೆ. ಆದ್ದರಿಂದ ತಾಲ್ಲೂಕು ಮಟ್ಟದಲ್ಲಿ ವಸತಿ-ಆಡಳಿತ ವಿಷಯಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಸಹಾಯಕ ನಿರ್ದೇಶಕರು ಹುದ್ದೆ ಸೃಜನೆ ಮಾಡುವ ಪ್ರಸ್ತಾವನೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮುಂದಿರುವುದಿಲ್ಲ.

ಸಂಖ್ಯೆ: ಗ್ರಾಅಪ 157 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.